# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 638 |
| ಸದಸ್ಯರ ಹೆಸರು | : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : 12.03.2025 |
| ಉತ್ತರಿಸುವ ಸಚಿವರು | : ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲ್ಲೂಕು ಲಾಯಿಲ ಗ್ರಾಮದ ಸರ್ವೆ ನಂಬರ್ 131/3ರಲ್ಲಿ 0.20 ಎಕರೆ (ಇಪ್ಪತ್ತು ಸೆಂಟ್) ಸರ್ಕಾರಿ ಜಮೀನನ್ನು ಲಾಯಿಲ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಮಂಜೂರು ಮಾಡುವ ಪ್ರಸ್ತಾವನೆಯನ್ನು "ಗೋಮಾಳ ಜಮೀನುಗಳನ್ನು ಖಾಸಗಿ ಸಂಘ ಸಂಸ್ಥೆಗಳಿಗೆ ಮಂಜೂರು ಮಾಡಲು ನಿಯಮಗಳಲ್ಲಿ ಅವಕಾವಿರುವುದಿಲ್ಲ" ಎಂದು ತಪ್ಪಾದ ಕಾರಣ ನೀಡಿ ತಿರಸ್ಕರಿಸಿರುವುದು ಸರ್ಕಾರಕ್ಕೆ ಗಮನಕ್ಕೆ ಬಂದಿದೆಯೇ; | ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನ ಲಾಯಿಲ ಗ್ರಾಮದ ಸರ್ವೆ ನಂಬರ್ 131/3ರಲ್ಲಿ 0.20 ಎಕರೆ (ಇಪ್ಪತ್ತು ಸೆಂಟ್) ವಿಸ್ತೀರ್ಣದ ಸರ್ಕಾರಿ ಜಮೀನಿನ ಲಾಯಿಲ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಮಂಜೂರು ಮಾಡುವ ಬಗ್ಗೆ, ಮೈಸೂರು ವಿಭಾಗದ ಪ್ರಾದೇಶಿಕ ಆಯುಕ್ತರಿಂದ ಪ್ರಸ್ತಾವನೆ ಸ್ವೀಕೃತವಾಗಿತ್ತು.<br><br>ಸದರಿ ಪ್ರಸ್ತಾವನೆಗೆ ಸಂಬಂಧಿಸಿದಂತೆ ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ 27 ರನ್ವಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ನಿಯಮ 22ಎ(2)ನ್ನು ಸಡಿಲಿಸುವ ಬಗ್ಗೆ ಕಾನೂನು ಇಲಾಖೆಯ ಅಭಿಪ್ರಾಯವನ್ನು ಕೋರಲಾಗಿತ್ತು.<br><br>ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ 22ಎ(2)ರನ್ವಯ ನಗರ ಪೌರ ಮಿತಿಯೊಳಗಿನ ಸರ್ಕಾರಿ ಜಮೀನನ್ನು ಯಾವುದೇ ವ್ಯಕ್ತಿ ಅಥವಾ ಖಾಸಗಿ ಸಂಸ್ಥೆಗಳಿಗೆ ಮಂಜೂರು ಮಾಡತಕ್ಕದ್ದಲ್ಲ. ಅದನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಕಾಯ್ದಿರಿಸಬೇಕಾಗಿರುತ್ತದೆ ಎಂಬುದಾಗಿ ಕಾನೂನು ಇಲಾಖೆಯು ಅಭಿಪ್ರಾಯಿಸಿರುತ್ತದೆ.<br><br>ಮುಂದುವರೆದು, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು K.C. Thimmaiah v. M.M. Somaiah ILR 1990 KAr 3583 ಪ್ರಕರಣದಲ್ಲಿ ನೀಡಿರುವ ತೀರ್ಪನ್ನು ಉಲ್ಲೇಖಿಸಿ, ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ 27ರನ್ವಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಯಾವುದೇ ನಿಯಮಗಳನ್ನು ಸಡಿಲಿಸಬೇಕಾದರೆ ಸದರಿ ಸಡಿಲಿಕೆಗೆ ಸಕಾರಣಗಳನ್ನು ನೀಡಬೇಕಾಗುತ್ತದೆ ಮತ್ತು ಯಾವ ಕಾರಣಕ್ಕಾಗಿ ನಿಯಮವನ್ನು |
| (ಆ) | ಬಂದಿದ್ದಲ್ಲಿ, ಗೋಮಾಲ ಜಮೀನು ಎಂದು ಸರಿಯಲ್ಲದ ಕಾರಣ ನೀಡಿ ತಿರಸ್ಕರಿಸಿರುವ ಸದರಿ ಪ್ರಸ್ತಾವನೆಯನ್ನು ಮತ್ತೊಮ್ಮೆ ಪರಿಶೀಲಿಸಿ ಕೂಡಲೇ ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲ್ಲೂಕು ಲಾಯಿಲ ಗ್ರಾಮದ ಸರ್ವೆ ನಂಬರ್: 131/3 ರಲ್ಲಿ 0.20 ಎಕರೆ (ಇಪ್ಪತ್ತು ಸೆಂಟ್) ಸದರಿ ಸರ್ಕಾರಿ ಜಮೀನನ್ನು ಲಾಯಿಲ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಮಂಜೂರು ಮಾಡಲು ಸರ್ಕಾರ ಅಗತ್ಯ ಕ್ರಮ ವಹಿಸುವುದೇ; | |
| (ಇ) | ಯಾವ ಕಾಲಮಿತಿಯೊಳಗೆ ಸದರಿ ಜಮೀನನ್ನು ಲಾಯಿಲ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಮಂಜೂರು ಮಾಡಲಾಗುವುದು? | |

| | | |
|---|---|---|
| | | ಸಡಿಲಿಕೆ ಮಾಡಲಾಗುತ್ತಿದೆ ಎಂಬ ಅಂಶವನ್ನು ವಿವರಿಸಬೇಕಾಗುತ್ತದೆ ಎಂದು ತಿಳಿಸಿ, ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನ ಲಾಯಿಲ ಗ್ರಾಮದ ಸರ್ವೆ ನಂಬರ್ 131/3ರಲ್ಲಿ 0.20 ಎಕರೆ (ಇಪ್ಪತ್ತು ಸೆಂಟ್) ವಿಸ್ತೀರ್ಣದ ಸರ್ಕಾರಿ ಜಮೀನಿನ ಲಾಯಿಲ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಮಂಜೂರು ಮಾಡಲು ಅವಕಾಶವಿಲ್ಲವೆಂದು ಕಾನೂನು ಇಲಾಖೆಯು ಅಭಿಪ್ರಾಯಿಸಿರುತ್ತದೆ.<br><br>ಆರ್ಥಿಕ ಇಲಾಖೆಯು ಕಾನೂನು ಇಲಾಖೆಯ ಅಭಿಪ್ರಾಯಕ್ಕೆ ಸಹಮತ ವ್ಯಕ್ತಪಡಿಸಿರುತ್ತದೆ.<br><br>ಕಾನೂನು ಇಲಾಖೆ ಮತ್ತು ಆರ್ಥಿಕ ಇಲಾಖೆಗಳ ಅಭಿಪ್ರಾಯದನ್ವಯ, ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನ ಲಾಯಿಲ ಗ್ರಾಮದ ಸರ್ವೆ ನಂಬರ್ 131/3ರಲ್ಲಿ 0.20 ಎಕರೆ (ಇಪ್ಪತ್ತು ಸೆಂಟ್) ವಿಸ್ತೀರ್ಣದ ಸರ್ಕಾರಿ ಜಮೀನಿನ ಲಾಯಿಲ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಮಂಜೂರು ಮಾಡಲು ಅವಕಾಶವಿರುವುದಿಲ್ಲ. ಈ ಹಿನ್ನೆಲೆಯಲ್ಲಿ ದಿನಾಂಕ: 05.10.2023ರಂದು ಪ್ರಾದೇಶಿಕ ಆಯುಕ್ತರಿಗೆ ಪ್ರಸ್ತಾವನೆಯನ್ನು ತಿರಸ್ಕರಿಸಿರುವುದಾಗಿ ಪತ್ರ ಬರೆಯಲಾಗಿರುತ್ತದೆ. ಆದರೆ, ಕಣ್ತಪ್ಪಿನಿಂದಾಗಿ ಗೋಮಾಳ ಜಮೀನುಗಳನ್ನು ಖಾಸಗಿ ಸಂಘ ಸಂಸ್ಥೆಗಳಿಗೆ ಮಂಜೂರು ಮಾಡಲು ನಿಯಮಗಳಲ್ಲಿ ಅವಕಾಶವಿಲ್ಲವೆಂದು ಉಲ್ಲೇಖಿಸಲಾಗಿರುತ್ತದೆ.<br><br>ಒಟ್ಟಾರೆಯಾಗಿ, ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ 22ಎ(2)ರನ್ವಯ ನಗರ ಪೌರ ಮಿತಿಯೊಳಗಿನ ಸರ್ಕಾರಿ ಜಮೀನನ್ನು ಯಾವುದೇ ವ್ಯಕ್ತಿ ಅಥವಾ ಖಾಸಗಿ ಸಂಸ್ಥೆಗಳಿಗೆ ಮಂಜೂರು ಮಾಡಲು ನಿರ್ಬಂಧವಿದ್ದು, ಅದನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಕಾಯ್ದಿರಿಸಬೇಕಾಗಿರುತ್ತದೆ. |

(ಕಡತ ಸಂಖ್ಯೆ:ಆರ್‌ಡಿ 25 ಎಲ್‌ಜಿಎ 2025)

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು